ಮೈಸೂರ ಗೆಜಿಟ್

ಸರ್ಕಾರದಿಂದ ಪಾಯಿಷ್ ಆದ್ದು.

ಬೆಂಗಳೂರು, ಶನಿವಾರ, ಜೂ ತಾ 14, ಸ್ಯ 1884.

ಗಮನ ಈ ಭಾಗವನ್ನು ಪ್ರತ್ಯೇಕ ಸೇರಿಸಿ ಇಡುವ ಬಗ್ಗೆ ಇದಕ್ಕೆ ಬೇರೆಯಾಗಿ ಪುಟ ಸಂಖ್ಯೆ ಕೊಡಲ್ಪಡುತ್ತೆ.

೨ನೇ ಭಾಗ

ಇಂಡ್ಯಗವರ್ಮೆಂಟ್, ರೆಸಿಡೆಂಟರು, ಚೀಫ್ ಜಡ್ಜ್‌ರುವಗೈರೇರಿಂದ ಕೊಡೋಣಾದ ಇಸ್ತಿಹಾರ್ ನಾಮೆಗಳು.

ರೆಸಿಡೆಂಟರ ಇಲಾಖಾ.

ಇಸ್ತಿಹಾರ್ ನಾಮೆ.

ಫಿನಾರ್ಷಿಯಲ್ ಇಲಾಖಾ.

1882ನೇ ಮೈಸೂರು ರೆಯಿಲ್‌ವೇ ಲೋನ್.

ತಾರೀಖು 6ನೇ ಜುಲೈ 1883.

ಲಂಡ್ಯನಲ್ಲಿ ಬಡ್ಡೀ ಸಲ್ಲತಕ್ಕ ಬಗ್ಗೆ ಷರಾ ಬರೆಯಲ್ಪಡಬಹುದಾದಂತಾ ಸದರೀ ಸಾಲದ ಡಿಬೆಂಚರ್‌ಗಳ ಮೇಲೆ ಲಂಡ್ಯನಲ್ಲಿ, ಸ್ಟ್ಯಾಂಡ್ ಬೀದಿ 59ನೇ ನಂಬರ್ ಕಟ್ಟಡದಲ್ಲಿರುವ ಬ್ಯಾಂಕರ್‌ಗಳಾದ ಮೆಸ್ಸರ್ಸ್ ಕಾಟ್ಸ್ ಅಂಡ್ ಕೋಯವರು ಬಡ್ಡೀಯನ್ನು ಪಾವತೀ ಮಾಡುವ ಬಗ್ಗೆ ಅವರುಗಳೊಡನೆ ಮೈಸೂರು ಗವರ್ಮೆಂಟಿನವರು ಯೇರ್ಪಾಡು ಮಾಡಿಕೊಂಡಿರುವದರಿಂದ ಲಂಡ್ಯನಲ್ಲಿ ತಮ್ಮ ಡಿಬೆಂಚರ್‌ಗಳಿಗೆ ಬಡ್ಡೀಯನ್ನು ತೆಗದುಕೊಳ್ಳಲಿಕ್ಕೆ ಯಿಷ್ಟವುಳ್ಳ ಜನಗಳು ತಮ್ಮ ಡಿಬೆಂಚರ್‌ಗಳನ್ನು ಎಷ್ಟೇನಿಮೆಂಟ್ ಯಾನೇ ಷರಾ ಬಗ್ಗೆ ಇದರಡಿ ರುಜು ಮಾಡಿರುವರ ಆಫೀಸಿಗೆ ಕಳುಹಿಸತಕ್ಕದ್ದು.

ಬಡ್ಡೀಯು, ಮದ್ರಾಸಿನಲ್ಲಿ ಮದರಾಸ್ ಬ್ಯಾಂಕಿನ ಮೇಲೆ, ಪ್ಯಾಯಿಲ್ಲೆ ಕೇಟುವ ಡಿವಾಂಡ್ ಡ್ರಾಫ್ಟ್ಸ್ ಯೆಂಬ ಚೆಕ್ಕುಗಳ ಮೂಲಕ ರೂಪಾಯಿಗಳಾಗಿ ಕೊಡಲ್ಪಡುವದು.

ಎಷ್ಟೇನಿಮೆಂಟ್ ಬಗ್ಗೆ ಫೀ ಯೇನೂ ಚಾರ್ಜ್ ಮಾಡಲ್ಪಡಲಾರದು.

ಹೆಚ್. ಹಡಿರ್ಸ,
ಕಾಂಪ್ಟ್ರೋಲರ್.